ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿನಾಲ್ಕನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 26ನೇ ಡಿಸೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2021-22ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸಿನ ಲೆಕ್ಕಗಳನ್ನು (ಸಂಪುಟ I ಮತ್ತು II) ಸಭೆಯ ಮುಂದಿಡುವುದು.

3. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2022-23ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತಿನ ಬೇಡಿಕೆಗಳನ್ನು ಮಂಡಿಸುವುದು.
ಆ) 2022-23ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಯು.ಟಿ. ಅಬ್ದುಲ್ ಖಾದರ್, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ ಹಾಗೂ ಇತರರು** - ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವುದಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು** – ರಾಜ್ಯಾದ್ಯಂತ ಅತಿವೃಷ್ಟಿ, ಅನಾವೃಷ್ಟಿ, ಹವಾಮಾನ ವೈಪರಿತ್ಯಗಳಿಂದಾಗಿ, ಕಳಪೆ ಬೀಜ, ಕಳಪೆ ಗೊಬ್ಬರ, ನಿಷೇಧಿತ ಕೀಟ ನಾಶಕಗಳ ಮಾರಾಟ, ಮಾರುಕಟ್ಟೆಯಲ್ಲಿ ಬೆಳೆಗಳ ದರ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಬಂಡೆಪ್ಪ ಖಾಶೆಂಪೂರ, ಎ.ಟಿ. ರಾಮಸ್ವಾಮಿ, ಎಂ. ಕೃಷ್ಣಾರೆಡ್ಡಿ, ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು** – ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿರುವ ರೈತರುಗಳಿಗೆ ಒದಗಿಸುವ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕೇಂದ್ರ ಸರ್ಕಾರವು ನೀಡಿರುವ ಸಬ್ಸಿಡಿ ಸೌಲಭ್ಯವನ್ನು ಪಡೆಯುವಲ್ಲಿ ರಾಜ್ಯ ಸರ್ಕಾರವು ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀ ಹೆಚ್. ಹಾಲಪ್ಪ ಹರತಾಳು ಮತ್ತು ಶ್ರೀ ದಿನಕರ ಕೇಶವ ಶೆಟ್ಟಿ ಇವರುಗಳು** – ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ ಅಧಿನಿಯಮ ಮತ್ತು ನಿಯಮಗಳನ್ನು ಸರಳೀಕರಿಸಿ, ಅರಣ್ಯ ಭೂ ಮಂಜೂರಾತಿ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2022ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2022ನೇ ಸಾಲಿನ ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ವಿ. ಸುನಿಲ್ ಕುಮಾರ್ (ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–

ಅ) 2022ನೇ ಸಾಲಿನ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಶ್ರೀ ಮುರುಗೇಶ ರುದ್ರಪ್ಪ ನಿರಾಣಿ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಅವರು:–**

ಅ) 2022ನೇ ಸಾಲಿನ ಕರ್ನಾಟಕ ವಿಶೇಷ ಹೂಡಿಕೆ ಪ್ರದೇಶ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಹೆಚ್. ಹಾಲಪ್ಪ ಹರತಾಳು ಅವರು** – ಸಾಗರ ತಾಲ್ಲೂಕಿನಲ್ಲಿ ವಿವಿಧ ಆಸ್ಪತ್ರೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಡಿ ಗ್ರೂಪ್ ನೌಕರರು ಮತ್ತು ವಾಹನ ಚಾಲಕರಿಗೆ ಪ್ರತಿ ತಿಂಗಳು ಮೊದಲ ವಾರದಲ್ಲಿಯೇ ವೇತನವನ್ನು ನೀಡದೇ ಮತ್ತು ಇಎಸ್ಐ/ಇಪಿಎಫ್ ಕೂಡ ತಡೆಹಿಡಿದಿರುವುದರಿಂದ ಸದರಿ ನೌಕರರ ಜೀವನ ನಿರ್ವಹಣೆ ಕಷ್ಟಕರವಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

2) **ಶ್ರೀ ಜಿ. ಸೋಮಶೇಖರ ರೆಡ್ಡಿ ಅವರು** – ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮುಂಡರಗಿ ಗ್ರಾಮದಲ್ಲಿ ವಸತಿ ನಿರ್ಮಾಣ ಮಾಡಲು ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

3) **ಶ್ರೀ ಬಸನಗೌಡ ದದ್ದಲ ಅವರು** – ಕಲ್ಯಾಣ ಕರ್ನಾಟಕ ಭಾಗದಲ್ಲಿ 371(ಜೆ) ಮೀಸಲಾತಿ ಜಾರಿಯಾದ ನಂತರ ಸ್ಥಳೀಯರು ಹಾಗೂ ಇತರೆ ಜಿಲ್ಲೆಗಳ ಉದ್ಯೋಗಾಕಾಂಕ್ಷಿಗಳನ್ನು ಮೀಸಲಾತಿ ಆಧಾರದ ಮೇಲೆ ತುಂಬಲಾಗಿರುವ ಹುದ್ದೆಗಳು ಹಾಗೂ ಖಾಲಿಯಿರುವ ಹುದ್ದೆಗಳು ಮತ್ತು ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಹಾಗೂ ಸದರಿ ನಿಗದಿತ ಮೀಸಲಾತಿಯನ್ನು ಶಿಕ್ಷಣದಲ್ಲಿ ವಿದ್ಯಾರ್ಥಿಗಳಿಗೆ ಒದಗಿಸಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ಕೆ.ಬಿ. ಅಶೋಕ್ ನಾಯ್ಕ್ ಅವರು** – ಹೊಳಲೂರು–ಬೂದಿಗೆರೆ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಿ ರೈತರಿಗೆ ನೀರು ಪೂರೈಸುವ ಬಗ್ಗೆ ಹಾಗೂ ಈ ಸಂಬಂಧ ತಾತ್ಸಾರ ತೋರಿಸುತ್ತಿರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

5) **ಡಾ. ಎನ್.ಎ. ಹ್ಯಾರಿಸ್ ಅವರು** – ಕೇಂದ್ರ ಸರ್ಕಾರವು ಒದಗಿಸಿರುವ ರಾಜ್ಯದಿಂದ ರಾಜ್ಯಕ್ಕೆ ವಾಹನ ವರ್ಗಾವಣೆಗೆ ಹೊಸ ಬಿಹೆಚ್ ಸಿರೀಸ್ ನೊಂದಣಿಯ ಸೌಲಭ್ಯವನ್ನು ರಾಜ್ಯ ಸರ್ಕಾರದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ ಅವರು** – ಕರ್ನಾಟಕ ಗಡಿ ಭಾಗದಲ್ಲಿ ವಾಸಿಸುತ್ತಿರುವ ಯುವಜನರು ಅವರ ಮಾತೃಭಾಷೆಯಾದ ಮರಾಠಿಯಲ್ಲಿ ನಾಸಿಕ್‌ನ ಯಶವಂತರಾವ್ ಚೌವ್ಹಾಣ್ ಮುಕ್ತ ವಿದ್ಯಾಪೀಠದಿಂದ ಪಡೆದಿರುವ ಪದವಿಯನ್ನು ಕರ್ನಾಟಕ ಸರ್ಕಾರದ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಯಲ್ಲಿ ಹಾಗೂ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳನ್ನು ಬಡ್ತಿ ನೀಡುವ ಸಂದರ್ಭದಲ್ಲಿ ಪದವಿ ಎಂದು ಪರಿಗಣಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

.. 4/ ..

7) **ಶ್ರೀ ಶಿವಾನಂದ ಎಸ್. ಪಾಟೀಲ ಅವರು** – ಬಸವನಬಾಗೇವಾಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕಿರಿಶ್ಯಾಳ, ಕೂಡ್ಲಗಿ ಹಾಗೂ ಇಂಗಳೇಶ್ವರ ಗ್ರಾಮದಲ್ಲಿನ ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಿ, ಕೆರೆಗಳನ್ನು ತುಂಬಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ.ಜಿ. ಬೋಪಯ್ಯ ಅವರು** – ಕೊಡಗು ಜಿಲ್ಲೆಯಲ್ಲಿ ಜಮ್ಮಾಬಾಣೆ ಮತ್ತು ಇತರೆ ಬಾಣೆ ಜಾಗಗಳಲ್ಲಿ ಕೃಷಿ ಮಾಡಿದ್ದರೆ ಮಾತ್ರ ಕಂದಾಯ ವಿಧಿಸುತ್ತಿದ್ದು, ಇದರಿಂದ ಕರ್ನಾಟಕ ಭೂ ಕಂದಾಯ ಕಾಯ್ದೆಯ ತಿದ್ದುಪಡಿ ಉಲ್ಲಂಘನೆಯಾಗುತ್ತಿರುವುದರಿಂದ ಸದರಿ ಕಾಯ್ದೆಯ ಅನ್ವಯ ಎಲ್ಲಾ ಜಮೀನುಗಳಿಗೂ ಕಂದಾಯ ವಿಧಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9) **ಶ್ರೀ ಹೆಚ್.ಕೆ. ಪಾಟೀಲ್ ಅವರು** – ಗದಗ ಕ್ಷೇತ್ರ ವ್ಯಾಪ್ತಿಯಲ್ಲಿ ಭಾರಿ ಮಳೆಯಿಂದ ಅನಾಹುತಕ್ಕೊಳಗಾದ ಮನೆಗಳಲ್ಲಿ ನೀರು ಹೊಕ್ಕವರಿಗೆ ಹಾಗೂ ಮನೆ ಬಿದ್ದವರಿಗೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10) **ಶ್ರೀ ಕೆ.ಎಸ್. ಈಶ್ವರಪ್ಪ ಅವರು** – ರಾಜ್ಯದಲ್ಲಿ ನಿರಂತರ ಜ್ಯೋತಿ ಯೋಜನೆಯಡಿ ಆಗಿರುವ ಲೋಪದೋಷಗಳು ಹಾಗೂ ಅವ್ಯವಹಾರಗಳ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

11) **ಶ್ರೀ ಎ. ಮಂಜುನಾಥ್ ಅವರು** – ಬೆಂಗಳೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟವು ಹಾಲು ಉತ್ಪಾದಕರಿಗೆ ಕಡಿಮೆ ದರವನ್ನು ಪಾವತಿಸುತ್ತಿರುವ ಬಗ್ಗೆ, ಒಕ್ಕೂಟದ ವ್ಯಾಪ್ತಿಯಲ್ಲಿನ ವಿವಿಧ ಕಟ್ಟಡಗಳ ಕಾಮಗಾರಿಯಲ್ಲಿ ಹಾಗೂ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮವೆಸಗಿರುವ ಬಗ್ಗೆ ಸಮಗ್ರವಾಗಿ ತನಿಖೆ ನಡೆಸುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

12) **ಶ್ರೀ ಹೆಚ್.ಪಿ. ಮಂಜುನಾಥ್ ಅವರು** – ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ವಸತಿ ನಿರ್ಮಾಣ ಯೋಜನೆಯಡಿ ಪರಿಶಿಷ್ಟ ಪಂಗಡಗಳ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಜನಾಂಗದವರಿಗೆ ನಿಗದಿಪಡಿಸಿರುವ ಗುರಿ, ನಿಗಮದಿಂದ ಪ್ರಕಟಿಸಿದ ಹಾಗೂ ಪ್ರಚಾರ ಮಾಡಿದ ಸಹಾಯಧನದ ಮೊತ್ತ ಹಾಗೂ ಮನೆ ಮಂಜೂರಾತಿ ಮತ್ತು ಕಾಮಗಾರಿ ಯೋಜನೆಯ ಒಟ್ಟು ವೆಚ್ಚಗಳ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಸಿದ್ದು ಸವದಿ ಅವರು – ಬಸ್ಸುಗಳ ಸೌಲಭ್ಯ ಕುರಿತಂತೆ ದಿನಾಂಕ: 21.12.2022ರಂದು ಮೂರನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 34(639)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

8. ವಿಶೇಷ ಚರ್ಚೆ

ರಾಜ್ಯದಲ್ಲಿ ಕಾಡುಪ್ರಾಣಿಗಳ ಹಾವಳಿ ಕುರಿತು ವಿಶೇಷ ಚರ್ಚೆ

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ